**ನೋಂದಣಿ ಅಂಚೆ ಮತ್ತು ಸ್ವೀಕೃತಿ ಬಾಕಿ**

ಸಂಖ್ಯೆ: ಡಿಟಿಇ 08 ಡಿಇಕ್ಯೂ(1) 2013 ದಿನಾಂಕ: 29/01/2015

**ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಕಛೇರಿಯ ನಡವಳಿಗಳು**

**ವಿಷಯ:** ಶ್ರೀ ವೆಂಕಟೇಶ್, ಸ್ಕ್ಯಾವೆಂಜರ್, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು ಇವರ ಅನಧಿಕೃತ ಗೈರು ಹಾಜರಿ ಕುರಿತು ಅಂತಿಮ ಆದೇಶ ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಪ್ರಿನ್ಸಿಪಾಲರು ಶ್ರೀ ವೆಂಕಟೇಶ್, ಸ್ಕ್ಯಾವೆಂಜರ್ ಇವರಿಗೆ ಜಾರಿ ಮಾಡಲಾದ ತಿಳುವಳಿಕೆ ಪತ್ರ ದಿನಾಂಕ: 21/03/2012, 21/06/2012, 20/05/2013, 20/07/2013, 24/07/2013.
2. ಪ್ರಿನ್ಸಿಪಾಲರಿಗೆ ಶ್ರೀ.ವೆಂಕಟೇಶ್, ಸ್ಕ್ಯಾವೆಂಜರ್ ಇವರು ಸಲ್ಲಿಸಿರುವ ಮನವಿ ಪತ್ರ ದಿನಾಂಕ: 23/01/2008, 22/09/2009.
3. ಪ್ರಿನ್ಸಿಪಾಲರು ನಿರ್ದೇಶಕರಿಗೆ ಬರೆದ ಪತ್ರ ದಿನಾಂಕ: 20/10/2009, 04/11/2010, 10/08/2013, 29/04/2014, 10/08/2013, 19/01/2015.
4. ನಿರ್ದೇಶಕರಿಂದ ಕಾರಣ ಕೇಳುವ ನೋಟೀಸ್ ದಿನಾಂಕ: 30/08/2013
5. ದೋಷಾರೋಪಣ ಪಟ್ಟಿ ದಿನಾಂಕ: 03/02/2014.
6. ವಿಚಾರಣಾಧಿಕಾರಿಗಳ ನೇಮಕಾತಿ ದಿನಾಂಕ: 09/05/2014.
7. ವಿಚಾರಣಾಧಿಕಾರಿಗಳು ಅಂತಿಮ ವರದಿ ಸಲ್ಲಿಸಿದ ದಿನಾಂಕ: 21/07/2014.
8. ಎರಡನೇ ಕಾರಣ ಕೇಳುವ ನೋಟೀಸು ದಿನಾಂಕ: 26/09/2014.
9. ಶ್ರೀ ವೆಂಕಟೇಶ್, ಸ್ಕ್ಯಾವೆಂಜರ್ ಇವರ ಸಮಜಾಯಿಷಿ ದಿನಾಂಕ: 07/11/2014.

**********

**ಪ್ರಸ್ತಾವನೆ:**

ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರುಘಟ್ಟ, ಬೆಂಗಳೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ **ಶ್ರೀ ವೆಂಕಟೇಶ್, ಸ್ಕ್ಯಾವೆಂಜರ್** ಇವರು ದಿ: 15/05/2013 ರಿಂದ 25/07/2013ರವರೆಗೆ ಹಾಗೂ ದಿನಾಂಕ: 02/06/2013 ರಿಂದ ಇಲ್ಲಿಯವರೆಗೂ ದೀರ್ಘಾವಧಿ ಅನಧಿಕೃತ ಗೈರು ಹಾಜರಾಗಿರುತ್ತಾರೆ. ಈ ಹಿಂದೆಯೂ ಸಹ ಇವರು ದೈನಂದಿನ ಕಛೇರಿ ಕೆಲಸಗಳಿಗೆ ಆಗಾಗ ಗೈರುಹಾಜರಾಗುವುದನ್ನು ರೂಢಿಸಿಕೊಂಡಿರುತ್ತಾರೆ. ಇವರ ಅನಧಿಕೃತ ಗೈರುಹಾಜರಿ ಹಾಗೂ ಕರ್ತವ್ಯ ನಿರ್ಲಕ್ಷ್ಯತೆ ಬಗ್ಗೆ ಸಂಸ್ಥೆಯ ಪ್ರಿನ್ಸಿಪಾಲರು ಬರೆದ ಪತ್ರದ ಅನುಸಾರ ಸದರಿಯವರಿಗೆ ಇಲಾಖಾ ವತಿಯಿಂದ ಕಾರಣ ಕೇಳುವ ನೋಟೀಸು ಜಾರಿ ಮಾಡಲಾಗಿ, ಕಾರಣ ಕೇಳುವ ನೋಟೀಸಿಗೆ ಸಮಜಾಯಿಷಿಯನ್ನು ದಿನಾಂಕ: 20/09/2014 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯನ್ನು ಪರಿಶೀಲಿಸಿದ ಶಿಸ್ತು ಪ್ರಾಧಿಕಾರವು ಒಪ್ಪದೇ ಗೈರುಹಾಜರಿಯ ಸತ್ಯಾಸತ್ಯತೆಯನ್ನು ಅರಿಯಲು ತೀರ್ಮಾನಿಸಿ ದಿನಾಂಕ 30/08/2013ರಲ್ಲಿ ಸದರಿಯವರ ಅನಧಿಕೃತ ಗೈರುಹಾಜರಿ ವಿರುದ್ಧ ದೋಷಾರೋಪಣ ಪಟ್ಟಿ ಜಾರಿಗೊಳಿಸಲಾಗಿತ್ತು. ಸದರಿಯವರು ತಮ್ಮ ಲಿಖಿತ ಸಮಜಾಯಿಷಿಯನ್ನು ದಿನಾಂಕ: 20/09/2013ರಲ್ಲಿ ಸಲ್ಲಿಸಿರುತ್ತಾರೆ. ಸದರಿಯವರ ಸಮಜಾಯಿಷಿಯನ್ನು ಒಪ್ಪದ ಶಿಸ್ತು ಪ್ರಾಧಿಕಾರವು ಅವರ ವಿರುದ್ಧ ಆರೋಪಗಳ ಬಗ್ಗೆ ಮತ್ತು ಕರ್ನಾಟಕ ನಾಗರೀಕ ಸೇವಾ ನಡತೆ (ವರ್ತನೆ) ನಿಯಮಗಳು 1966ರ ಸಾಮಾನ್ಯ ನಿಯಮ 1) (i), (ii), (iii) ನ್ನು ಉಲ್ಲಂಘಿಸಿದ ಕಾರಣಕ್ಕಾಗಿ ಅನಧಿಕೃತ ಗೈರು ಹಾಜರಿಯ ಅವಧಿಗೆ ಪೂರ್ಣಾವಧಿ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ ದಿನಾಂಕ: 09/05/2014ರಂದು ಶ್ರೀ ಎಂ.ಜಿ. ಹಿರೇಮಠ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ ಆದೇಶ ಹೊರಡಿಸಲಾಯಿತು. ಅದರಂತೆ ವಿಚಾರಣಾಧಿಕಾರಿಗಳು ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿಚಾರಣೆ ನಡೆಸಿ ದಿನಾಂಕ: 21/07/2014ರಂದು ವಿಚಾರಣೆಯ ಅಂತಿಮ ವರದಿಯನ್ನು ಸಲ್ಲಿಸಿರುತ್ತಾರೆ.

ಸದರಿ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ ಆರೋಪಿತರ ವಿರುದ್ಧ ಮಾಡಿದ ಆರೋಪಗಳನ್ನು ಅವರ ಪ್ರಾರಂಭಿಕ ಹೇಳಿಕೆಯನ್ನು ಸಲ್ಲಿಸಿ ಆರೋಪವನ್ನು ಒಪ್ಪಿಕೊಂಡಿರುತ್ತಾರೆ. ಆಪಾದಿತರು ಅವರ ವಿರುದ್ಧ ಮಾಡಿದ ಆರೋಪವನ್ನು ಒಪ್ಪಿಕೊಂಡಿದ್ದರಿಂದ ಅವರ ವಿರುದ್ಧ ಮಾಡಿದ ಆರೋಪವು ಸಾಬೀತಾಗಿರುತ್ತದೆಂದು ನಿರ್ಧರಿಸಿ ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ಆಪಾದಿತರು ಅವರ ವಿರುದ್ಧ ಮಾಡಿದ ಆರೋಪವನ್ನು ಒಪ್ಪಿಕೊಂಡಿದ್ದರಿಂದ ಮಂಡನಾಧಿಕಾರಿಗಳು ಆರೂಪವನ್ನು ಸಾಬೀತು ಪಡಿಸಲು ಯಾವುದೇ ಸಾಕ್ಷಿಧಾರರನ್ನು ವಿಚಾರಿಸಿರುವುದಿಲ್ಲ ಮತ್ತು ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ. ಮಂಡನಾಧಿಕಾರಿಗಳು ಆರೋಪ

ಸಾಬೀತಾಗಿದೆಯೆಂದು ವರದಿ ಸಲ್ಲಿಸಲು ಕೋರಿರುತ್ತಾರೆ. ಆಪಾದಿತರು ಸಹ ತಮ್ಮ ಲಿಖಿತ ಪ್ರತಿವಾದವನ್ನು ಸಲ್ಲಿಸಿ ಮೌಖಿಕ ವಾದ ಮಂಡಿಸಿದರು.

ಈ ಪ್ರಕರಣದಲ್ಲಿ ಆರೋಪಿತರಿಂದ ದುರ್ನಡತೆ ಎಸಗಲ್ಪಟ್ಟಿರುವುದನ್ನು ಯಾವುದೇ ಸಂದೇಹಕ್ಕೆ ಆಸ್ಪದ ಇಲ್ಲದಂತೆ ಖಚಿತಪಡಿಸಿದೆ. ಈ ಅಂಶಗಳನ್ನು ಸಮರ್ಥವಾಗಿ ಅಲ್ಲಗಳೆಯುವಂತಹ ಯಾವುದೇ ಮೌಖಿಕ ಅಂಶಗಳನ್ನು ಸಹ ಆರೋಪಿತರು ನಿರೂಪಿಸಿರುವುದಿಲ್ಲ. ವಿಚಾರಣೆಯು ಸಮರ್ಪಕವಾಗಿ ನಡೆದು ಆರೋಪಿತರಿಗೆ ತಮ್ಮ ವಾದವನ್ನು ಮಂಡಿಸಲು ವಿಫುಲ ಅವಕಾಶವನ್ನು ನೀಡಲಾಗಿದೆ. ಈ ಕಛೇರಿಯ ಎರಡನೇ ಕಾರಣ ಕೇಳುವ ನೋಟಿಸ್ ಸಂ: ಡಿಟಿಇ 08 ಡಿಇಕ್ಯೂ(1)2013, ದಿನಾಂಕ:26/092014ರಲ್ಲಿ ವಿಚಾರಣಾಧಿಕಾರಿಗಳು ಸಲ್ಲಿಸಿರುವ ವರದಿಯನ್ನು ಲಗತ್ತಿಸಿ, ಸದರಿಯವರ ವಿರುದ್ಧ ಹೊರಿಸಲಾದ ಆರೋಪವು ಸಾಬೀತಾಗಿದೆಯೆಂದು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಏಕೆ ಸೂಕ್ತ ದಂಡನೆ ವಿಧಿಸಬಾರದು ಎಂಬುದರ ಬಗ್ಗೆ ನೋಟಿಸ್ ತಲುಪಿದ 30 ದಿವಸಗಳೊಳಗಾಗಿ ಲಿಖಿತ ಸಮಜಾಯಿಷಿ ಸಲ್ಲಿಸಲು ತಿಳಿಸಲಾಗಿತ್ತು.

ಆದರೆ ಸದರಿ 2ನೇ ಕಾರಣ ಕೇಳುವ ನೋಟಿಸನ್ನು ಸ್ವೀಕರಿಸಿ, ದಿನಾಂಕ: 07/11/20014ರಂದು ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ. ಸದರಿಯವರ ಸಮಜಾಯಿಷಿಯನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಶ್ರೀ ವೆಂಕಟೇಶ್, ಸ್ಕ್ಯಾವೆಂಜರ್, ಇವರ ಅನಧಿಕೃತ ಗೈರು ಹಾಜರಿ ಬಗ್ಗೆ ನಿರ್ದಿಷ್ಟವಾದ ಮತ್ತು ಸ್ಪಷ್ಟವಾದ ಹಾಗೂ ಪುಷ್ಠೀಕರಿಸುವಂತಹ ಯಾವುದೇ ಕಾರಣಗಳನ್ನು ಅಥವಾ ದಾಖಲೆಗಳನ್ನಾಗಲೀ ಸಲ್ಲಿಸಿರುವುದಿಲ್ಲ ಹಾಗೂ ಸದರಿಯವರ ಸೇವಾವಧಿಯನ್ನು ಗಮನಿಸಲಾಗಿ ಈ ಹಿಂದೆಯೂ ಸಹ ಹಲವಾರು ಬಾರಿ ಗೈರು ಹಾಜರಾದ ಹಿನ್ನಲೆಯಲ್ಲಿ ಪ್ರಿನ್ಸಿಪಾಲರ ಹಂತದಲ್ಲಿ ಜ್ಞಾಪನಗಳನ್ನು ಜಾರಿಮಾಡಲಾಗಿದ್ದರೂ ಸಹ ಅವರ ವರ್ತನೆಯಲ್ಲಿ ಯಾವುದೇ ಬದಲಾವಣೆ ಆಗಿರುವುದಿಲ್ಲ. ಮತ್ತು ಇವರು ಅನಧಿಕೃತ ಗೈರು ಹಾಜರಿಯ ಹವ್ಯಾಸವನ್ನೇ ಬಳಸಿಕೊಂಡಿರುವ್ಯದರಿಂದ ಆರೋಪಿತರು ಸಲ್ಲಿಸಿದ ಸಮಜಾಯಿಷಿಯನ್ನು ಒಪ್ಪದೆ ಅವರ ವಿರುದ್ಧದ ವಿಚಾರಣಾ ವರದಿಯನ್ನು ಅಂಗೀಕರಿಸಿ ವಿಚಾರಣಾಧಿಕಾರಿಗಳ ನಿರ್ಣಯವನ್ನು ಒಪ್ಪಿಕೊಂಡ ಶಿಸ್ತು ಪ್ರಾಧಿಕಾರವು ಈ ಮುಂದಿನಂತೆ ಆದೇಶಿಸುತ್ತದೆ.

**<u>ನಿರ್ದೇಶಕರ ಆದೇಶ ಸಂಖ್ಯೆ: ಡಿಟಿಇ 08 ಡಿಇಕ್ಯೂ(1)2013, ಬೆಂಗಳೂರು</u>**

**<u>ದಿನಾಂಕ: 29 ನೇ ಜನವರಿ 2015</u>**

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಕಾರಣಗಳಿಂದಾಗಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಾವಳಿ 1957ರ ನಿಯಮ 8(vi) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರುಘಟ್ಟ, ಬೆಂಗಳೂರು ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಶ್ರೀ ವೆಂಕಟೇಶ್, ಸ್ಕ್ಯಾವೆಂಜರ್, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ **<u>ಸರ್ಕಾರಿ ಸೇವೆಯಿಂದ ಈ ಮೂಲಕ ಕಡ್ಡಾಯ ನಿವೃತ್ತಿಗೊಳಿಸಿದೆ.</u>**

ಸದರಿಯವರ ಗೈರು ಹಾಜರಾದ ಅವಧಿಯನ್ನು ಕೆಲಸ ಮಾಡದ ದಿನಗಳೆಂದು (Dies none) ಎಂದು ಪರಿಗಣಿಸಿ ಆದೇಶಿಸಲಾಗಿದೆ.

**ನಿರ್ದೇಶಕರು**
**ಹಾಗೂ ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರ,**
**ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.**

ಇವರಿಗೆ,

1. ಶ್ರೀ ವೆಂಕಟೇಶ್, ನಂ.94, 2ನೇ ಮುಖ್ಯರಸ್ತೆ, 7ನೇಕ್ರಾಸ್, ಚಾಮರಾಜಪೇಟೆ, ಬೆಂಗಳೂರು-560018.
2. ಶ್ರೀ ವೆಂಕಟೇಶ್, ನಂ.135, 10ನೇ ಕ್ರಾಸ್, ವೆಸ್ಟ್ ಆಫ್ ಕಾರ್ಡ್ ರೋಡ್, ಮಂಜುನಾಥ ನಗರ, ಬೆಂಗಳೂರು
3. ಶ್ರೀ. ವೆಂಕಟೇಶ್, ಸ್ಕ್ಯಾವೆಂಜರ್, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರುಘಟ್ಟ, ಬೆಂಗಳೂರು. (ಪ್ರಿನ್ಸಿಪಾಲರ ಮುಖಾಂತರ)
4. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸ ಸೌಧ, ಬೆಂಗಳೂರು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 10 ಪ್ರತಿಗಳನ್ನು, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುವುದು.

<u>ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ</u>

1. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
3. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
4. ಪತ್ರಿಕಾ ಕಾರ್ಯದರ್ಶಿಗಳು, ಮಾನ್ಯ ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು
5. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
6. ಜಂಟಿ ನಿರ್ದೇಶಕರು (ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
7. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
8. ಪ್ರಾಂಶುಪಾಲರು, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರುಘಟ್ಟ, ಬೆಂಗಳೂರು ಇವರು ಸದರಿಯವರನ್ನು ಕಡ್ಡಾಯ ನಿವೃತ್ತಿಗೊಳಿಸಿರುವ ಪ್ರಯುಕ್ತ ಕೂಡಲೇ ಇವರನ್ನು ಕಾರ್ಯವಿಮುಕ್ತಿಗೊಳಿಸಲು ಸೂಕ್ತ ಕ್ರಮ ಕೈಗೊಂಡು ವರದಿ ಕಳುಹಿಸುವುದು.
9. ನಿರ್ದೇಶನಾಲಯದ ಆಪ್ತ ಶಾಖೆಗೆ.
10. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
11. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಸದರಿ ಆದೇಶವನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಕ್ತ ಕ್ರಮಕ್ಕಾಗಿ.
12. ಇಎಸ್‌ಟಿ(6), ಇಎಸ್‌ಟಿ8(ಬಿ), ಇಎಸ್‌ಟಿ(9) ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು